ಕರ್ನಾಟಕ ವಿಧಾನ ಸಭೆ

578

ಶ್ರೀ ಹಾಲಪ್ಪ ಹೆಚ್ (ಸೊರಬ)

ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಲ್ಲಿ ತಾಲ್ಲೂಕು ಮಟ್ಟದ ಕಛೇರಿಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದಾಗಿ ಇಲಾಖಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ತಾಲ್ಲೂಕು ಕಛೇರಿಯನ್ನು ಇದುವರೆವಿಗೂ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

ಸಮಾಜ ಕಲ್ಯಾಣ ಮತ್ತು ಬಂಧೀಖಾನೆ ಸಚಿವರು.

ಅ) ಬಂದಿದೆ.

ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಛೇರಿಗಳನ್ನು ತೆರೆಯುವ ಪ್ರಸ್ತಾವನೆಯು ಸರ್ಕಾರದೆ ಪರಿಶೀಲನೆಯಲ್ಲಿದೆ. ಪ್ರಸ್ತುವ ಪ್ರತಿ ತಾಲ್ಲೂಕಿನಲ್ಲೂ ಗ್ರೂಪ್ – ಸಿ ಮಟ್ಟದ ವಿಸ್ತರಣಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಸಂಖ್ಯೆ ಸಕಇ 211 ಬಿಇಟಿ 2012

(ಎ. ನಾರಾಯಣಸ್ವಾಮಿ)

ಸಮಾಜ ಕಲ್ಯಾಣ ಮತ್ತು ಬಂಧಿಖಾನೆ ಸಚಿವರು.

ಕರ್ನಾಟಕ ವಿಧಾನ ಸಭೆ

581

ಶ್ರೀ ವೆಂಕಟಸ್ವಾಮಿ

ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ. ಹೈಟೆಕ್ ಬಸ್ ನಿಲ್ದಾಣದ ಸಂಕೀರ್ಣ ಮಂಜೂರು ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

ಆ) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು; ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು?

ಮಾನ್ಯ ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಸಚಿವರು.

ಅ) ಕರಾರಸಾಸಂಸ್ಥೆ ಹೌದು. ಆದರೆ ಸೂಕ್ತ ನಿವೇಶನ ದೊರಕಿರುವುದಿಲ್ಲ. ನಿವೇಶನವು ಸಾರಿಗೆ ನಿಗಮದ ವಶಕ್ಕೆ ಬಂದ ನಂತರ ಸಾರಿಗೆ ನಿಗಮದ ಆಂತರಿಕ ಸಂಪನ್ಮೂಲಗಳ ಲಭ್ಯತೆಗೆ ಅನುಗುಣವಾಗಿ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಬಸ್ ನಿಲ್ದಾಣವನ್ನು ನಿರ್ಮಿಸಲು ಪರಿಶೀಲಿಸಲಾಗುವುದು.

ಬಿಎಂಟಿಸಿ : ದೇವನಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಬಿ.ಎಂ.ಟಿ.ಸಿ. ಹೈಟೆಕ್ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುತ್ತದೆ. ಪ್ರಸ್ತುತ ಬಸ್ ನಿಲ್ದಾಣಕ್ಕೆ ಸೂಕ್ತ ನಿವೇಶನ ಇನ್ನೂ ದೊರಕಿರುವುದಿಲ್ಲ. ನಿವೇಶನ ದೊರಕಿದ ತಕ್ಷಣ ಸದರಿ ಯೋಜನೆಯನ್ನು ಕೈಗೊಳ್ಳಲಾಗುವುದು. ಹಾಗೂ ಯೋಜನಾ ವೆಚ್ಚವನ್ನು ಸಿದ್ಧಪಡಿಸಲಾಗುವುದು.

ಸಾರಿಇ 75 ಸಾಸಂಪ್ರ 2012

(ಆರ್. ಅಶೋಕ್)
ಉಪ ಮುಖ್ಯಮಂತ್ರಿಗಳು
ಸಾರಿಗೆ ಮತ್ತು ಗೃಹ

ವಿಷಯ : ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳು

597

ಶ್ರೀ ಪ್ರತಾಪಗೌಡ ಪಾಟೀಲ್

ಅ) ರಾಯಚೂರು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

ಆ) ಅವುಗಳನ್ನು ಭರ್ತಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ?